# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2013-14ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಯೋಜನೆಯಡಿ 2012-13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ - ರಾಜ್ಯ ಸಹಾಯಧನ ಪಾವತಿಸಲು ಅನುದಾನ ಬಿಡುಗಡೆ ಕುರಿತು

ಪ್ರಸ್ತಾವನೆ:

2013-14ನೇ ಸಾಲಿನ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ 2810-01-198-1-01-(Lumpsum)ರೂ.120.00 ಲಕ್ಷಗಳನ್ನು ರಾಷ್ಟ್ರೀಯ ಜೈವಾನಿಲ ಯೋಜನೆಯಡಿ, ರಾಜ್ಯ ಅನಿಲ ಯೋಜನೆಯಡಿ ರಾಜ್ಯ ಸಹಾಯಧನ ಪಾವತಿಸಲು ನಿಗದಿಪಡಿಸಲಾಗಿದೆ. ಇದರನ್ವಯ 2012-13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ರಾಜ್ಯ ಸಹಾಯಧನವನ್ನು ಬಿಡುಗಡೆ ಮಾಡಬೇಕಾಗಿದ್ದು, 2012-13ನೇ ಸಾಲಿನಲ್ಲಿ ಶೇ100 ಹಾಗೂ ಹೆಚ್ಚು ಪ್ರಗತಿ ಸಾಧಿಸಿದ ಜಿಲ್ಲಾ ಪಂಚಾಯತ್‌ಗಳಿಗೆ ಬಾಕಿ ಇರುವ ಅನುದಾನವನ್ನು ಲಭ್ಯವಿರುವ ಅನುದಾನಕ್ಕೆ ಮಿತಿಗೊಳಪಟ್ಟು ಬಾಗಲಕೋಟೆ, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಹಾಸನ ಹಾಗೂ ಬೆಳಗಾಂ ಜಿಲ್ಲಾ ಪಂಚಾಯತ್‌ಗಳಿಗೆ ಕೆಲವೊಂದು ಷರತ್ತು ಮತ್ತು ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 27 ಜೈಅಯೋ 2013, ಬೆಂಗಳೂರು, ದಿನಾಂಕ 20.08.2013**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ 2013-14ನೇ ಸಾಲಿನಲ್ಲಿ, 2012-13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ರಾಜ್ಯ ಸಹಾಯಧನ ಪಾವತಿಸಲು ರೂ.30.00 ಲಕ್ಷಗಳನ್ನು (ಮೂವತ್ತು ಲಕ್ಷಗಳು ಮಾತ್ರ) ಲೆಕ್ಕ ಶೀರ್ಷಿಕೆ 2810-01-198-1-01-(Lumpsum)ರಡಿ ಈ ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಹಂಚಿಕೆಯಂತೆ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆ ಮಾಡಿದ ಅನುದಾನ ( ರೂ.ಲಕ್ಷಗಳಲ್ಲಿ) |
|---|---|---|
| 1 | ಬಾಗಲಕೋಟೆ | 3.85 |
| 2 | ದಕ್ಷಿಣ ಕನ್ನಡ | 12.08 |
| 3 | ಹಾಸನ | 2.26 |
| 4 | ಉಡುಪಿ | 6.23 |
| 5 | ಉತ್ತರಕನ್ನಡ | 2.63 |
| 6 | ಬೆಳಗಾಂ* | 2.95 |
| | ಒಟ್ಟು | 30.00 |

(* ಅನುದಾನದ ಲಭ್ಯತೆಗೊಳಪಟ್ಟುಮಿತಿಗೊಳಿಸಿದೆ)

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ರವರ ಕೋರಿಕೆಯನ್ವಯ 2012-13ನೇ ಸಾಲಿನಲ್ಲಿ ಬಾಕಿ ಉಳಿದ ಅನುದಾನ ರೂ.17.55 ಲಕ್ಷಗಳನ್ನು 2012-13ನೇ ಸಾಲಿನಲ್ಲೇ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನ ಬಾಕಿ ಪಾವತಿಗಾಗಿ ಬಿಡುಗಡೆ ಮಾಡಲು ಅನುಮತಿಸಲಾಗಿದೆ.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡತಕ್ಕದ್ದಲ್ಲ.

ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ : ಗ್ರಾಅಪ 279 ಪಿಬಿಎಸ್ 2013 ದಿನಾಂಕ 03.08.2013ರಲ್ಲಿ ಪಡೆದು ಹೊರಡಿಸಲಾಗಿದೆ.

ಷರತ್ತು ಮತ್ತು ನಿಬಂಧನೆಗಳು :

1. ಯೋಜನೆಯ ಮಾರ್ಗಸೂಚಿಯನ್ವಯ ಪ್ರತಿ ಜಿಲ್ಲೆಯ ಪ್ರತಿಯೊಂದು ಅಖಿಲ ಸ್ಥಾವರದ ಜಿ.ಪಿ.ಎಸ್. ಫೋಟೋ, ಫಲಾನುಭವಿಗಳ ಫೋಟೋ, ಫಲಾನುಭವಿಗಳ ವಿವರಗಳನ್ನು ದಾಖಲಾತಿ ರಿಜಿಸ್ಟರ್‌ನಲ್ಲಿ ದಾಖಲಿಸುವುದು.
2. ಪ್ರತಿಯೊಂದು ಅನಿಲ ಸ್ಥಾವರ ಘಟಕಕ್ಕೆ ಸಂಬಂಧಪಟ್ಟಂತೆ ಪ್ರತ್ಯೇಕ ಫಲಾನುಭವಿ ಕಡತ ನಿರ್ವಹಿಸತಕ್ಕದ್ದು.
3. ಪ್ರತಿ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಫಲಾನುಭವಿಗಳ ವಿವರ ಮತ್ತು ಆರ್ಥಿಕ ಭೌತಿಕ ಪ್ರಗತಿ ವಿವರಗಳ ಕಡ್ಡಾಯವಾಗಿ ಮಂಡಿಸುವುದು ಹಾಗೂ ಪಂಚತಂತ್ರ Worksoftನಲ್ಲಿ ಅಳವಡಿಸುವುದು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಹಂತದಲ್ಲಿ ಶೇ. 50ರಷ್ಟು ಉಪ ಕಾರ್ಯದರ್ಶಿ, ಮುಖ್ಯ ಲೆಕ್ಕಾಧಿಕಾರಿ ಹಾಗೂ ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್‌ರವರ ಹಂತದಲ್ಲಿ ತಲಾ ಶೇ. 15ರಷ್ಟು (ಒಟ್ಟು ಶೇ.45ರಷ್ಟು) ಕಡ್ಡಾಯವಾಗಿ ಪರಿವೀಕ್ಷಣೆ ಮಾಡುವುದು (Inspection)
5. ತಾಲ್ಲೂಕು ಪಂಚಾಯತ್ ಅಧಿಕಾರಿಗಳ ಹಂತದಲ್ಲಿ ಶೇ. 25ರಷ್ಟು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹಂತದಲ್ಲಿ ಶೇ. 25ರಷ್ಟು ಕಡ್ಡಾಯವಾಗಿ ಪರಿವೀಕ್ಷಣೆ ಮಾಡುವುದು (Inspection)
6. ಈ ಮೇಲಿನ ಹಂತಗಳಲ್ಲಿ ಪರಿವೀಕ್ಷಣೆ ಮಾಡಲಾದ ವಿವರಗಳನ್ನು ಒಂದು ಸವಿವರವಾದ ಟಿಪ್ಪಣಿಯೊಂದಿಗೆ ನಿರ್ದೇಶಕರು, ಗ್ರಾಮೂಸೌ-2 ರವರಿಗೆ ಸಲ್ಲಿಸತಕ್ಕದ್ದು.
7. ಯೋಜನೆಯ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಹಾಗೂ ಇದರ ಪಾಲನೆಯ ಸಂಪೂರ್ಣ ಜವಾಬ್ದಾರಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ರವರು ಮಾಡತಕ್ಕದ್ದು.
8. ಪ್ರತಿ ಮಾಹೆ 5ನೇ ದಿನಾಂಕದೊಳಗೆ ಪ್ರಗತಿ ವರದಿಯನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Hemalatha
(ಪಿ. ಹೇಮಲತ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ದಕ್ಷಿಣಕನ್ನಡ, ಹಾಸನ, ಉಡುಪಿ, ಉತ್ತರ ಕನ್ನಡ ಹಾಗೂ ಬೆಳಗಾಂ.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ, ದಕ್ಷಿಣಕನ್ನಡ, ಹಾಸನ, ಉಡುಪಿ, ಉತ್ತರ ಕನ್ನಡ ಹಾಗೂ ಬೆಳಗಾಂ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾ.ಅ. ಮತ್ತು ಪಂ.ರಾ. ಇಲಾಖೆ

ಪ್ರತಿ:

1. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ